# ಲೋಕಾ ಕಾಯ್ದೆ ತಿದ್ದುಪಡಿ ವಿಧೇಯಕಕ್ಕೆ ಅಸ್ತು

ವಿಧಾನಸಭೆ: ಯಾವುದೇ ಪ್ರಕರಣ, ದೂರು, ವಿಷಯವನ್ನು ಆಲಿಸಲು, ಪರಿಗಣಿಸಲು ಅಥವಾ ಯಾವುದೇ ರೀತಿಯಲ್ಲಿ ವ್ಯವಹರಿಸಲು, ವಿಲೇವಾರಿ ಮಾಡಲು ಲೋಕಾಯುಕ್ತರು ಹಿಂದೆ ಸರಿಯಲು ಇಚ್ಛಿಸಿದರೆ ಅಂತಹ ಪ್ರಕರಣಗಳ ವಿಚಾರಣೆಯನ್ನು ಉಪಲೋಕಾಯುಕ್ತರಿಗೆ ನೀಡಲು ಅವಕಾಶ ಕಲ್ಪಿಸುವ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕಕ್ಕೆ ಮಂಗಳವಾರ ಅನುಮೋದನೆ ನೀಡಲಾಯಿತು.

ಮುಖ್ಯಮಂತ್ರಿ ಯಡಿಯೂರಪ್ಪ ಪರವಾಗಿ ವಿಧೇಯಕ ಕುರಿತು ಮಾತನಾಡಿದ ಸಚಿವ ಜೆ.ಸಿ. ಮಾಧುಸ್ವಾಮಿ, ಲೋಕಾಯುಕ್ತರು ತಾವೇ ಖುದ್ದಾಗಿ ವಿಚಾರಣೆ ಮಾಡಲು ಸಾಧ್ಯವಿಲ್ಲವೆನಿಸಿದ ಪ್ರಕರಣಗಳನ್ನಷ್ಟೇ ಉಪಲೋಕಾಯುಕ್ತರು ವಿಚಾರಣೆ ನಡೆಸಲು ಅವಕಾಶ ಕಲ್ಪಿಸುವುದು ವಿಧೇಯಕ ಉದ್ದೇಶ. ಕೆಲವೊಮ್ಮೆ ನಿರ್ದಿಷ್ಟ ಕಾರಣಗಳಿಗೆ ಲೋಕಾಯುಕ್ತರು ಆಯ್ದ ಪ್ರಕರಣಗಳ ವಿಚಾರಣೆಯಿಂದ ಹಿಂದೆ ಸರಿಯುವ ಸಾಧ್ಯತೆ ಇರುತ್ತದೆ. ಆ ಸಂದರ್ಭದಲ್ಲಿ ಪ್ರಕರಣ ವರ್ಗಾವಣೆಗೆ ಅವಕಾಶವಿರಲಿಲ್ಲ. ಆ ಹಿನ್ನೆಲೆಯಲ್ಲಿ ತಿದ್ದುಪಡಿ ವಿಧೇಯಕ ಮಂಡಿಸಲಾಗಿದೆ ಎಂದು ತಿಳಿಸಿದರು.

ವಿಧಾನಮಂಡಲ ಅಧಿವೇಶನ



## ಇ-ನಕ್ಷೆ ಮಂಜೂರಾತಿ, ಖಾತಾ ನೋಂದಣಿ: ಕಾಯ್ದೆಗೆ ತಿದ್ದುಪಡಿ

ವಿಧಾನಸಭೆ: ರಾಜ್ಯದ ನಗರ ಪ್ರದೇಶಗಳಲ್ಲಿ ಇ-ನಕ್ಷೆ ಮಂಜೂರಾತಿ, ಖಾತಾ ನೋಂದಣಿ ಹಾಗೂ ನಿವೇಶನ ಖಾತೆ ದಾಖಲು, ಖಾತಾ ವರ್ಗಾವಣೆಯಲ್ಲಿನ ಸಮಸ್ಯೆ ನಿವಾರಣೆ ಸಂಬಂಧ ಕಾಯ್ದೆಗೆ ಸೂಕ್ತ ತಿದ್ದುಪಡಿ ತರಲಾಗುವುದು ಎಂದು ಸಚಿವ ಜೆ.ಸಿ.ಮಾಧುಸ್ವಾಮಿ ಭರವಸೆ ನೀಡಿದರು.

ಹರತಾಳು ಹಾಲಪ್ಪ, ಸಿದ್ದು ಸವದಿ, ಸುಭಾಷ್ ಗುತ್ತೇದಾರ್ ಹಾಗೂ ಕಳಕಪ್ಪ ಬಂಡಿ ಅವರು ನಗರ ಪ್ರದೇಶಗಳಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅನುಮೋದನೆಯಾಗದೇ ಇರುವ ನಿವೇಶನಗಳ ಖಾತಾ ದಾಖಲು/ ವರ್ಗಾವಣೆ ಸ್ಥಗಿತಗೊಳಿಸಿರುವುದರಿಂದ ಜನರಿಗೆ ತೊಂದರೆಯಾಗುತ್ತಿರುವ ಬಗ್ಗೆ ಪ್ರಸ್ತಾಪಿಸಿದ ವಿಚಾರಕ್ಕೆ ಅವರು ಉತ್ತರ ನೀಡಿದರು. ಇತ್ತೀಚೆಗೆ ಸಿಎಂ ಅಧ್ಯಕ್ಷತೆಯಲ್ಲಿ ಈ ಕುರಿತು ಚರ್ಚೆ ನಡೆಯಿತು. ಹಳೆಯ ಪುರಸಭೆ ವ್ಯಾಪ್ತಿಯಲ್ಲಿದ್ದ ನಿವೇಶನಗಳಿಗೆ ಇದೀಗ ನಗರ ಯೋಜನೆ ವಿಭಾಗದವರು ಇ-ನಕ್ಷೆ ನೀಡದಿರುವುದು, ಈ ಹಿಂದೆ ನಗರಸಭೆ, ಪುರಸಭೆ ವ್ಯಾಪ್ತಿಗೆ ಹಳ್ಳಿಗಳನ್ನು ಸೇರಿಸಿ ನೋಟಿಫೈ ಮಾಡಿದ್ದರೂ ಅಂತಹ ನಿವೇಶನಗಳಿಗೆ ಇದೀಗ ನಗರ ಯೋಜನೆ ಅಡಿ ಇ-ನಕ್ಷೆ ನೀಡದಿರುವುದು, ಬಗರ್ ಹುಕುಂ ಅಡಿ ಹಂಚಿಕೆಯಾದ ಭೂಮಿ ಹಾಗೂ ಮಲೆನಾಡಿನ ಭಾಗದಲ್ಲಿ ಅರಣ್ಯ ಪ್ರದೇಶ ಒತ್ತುವರಿ ಸಂಬಂಧ 94ಸಿ ಹಾಗೂ 94ಸಿಸಿ ವ್ಯಾಪ್ತಿಗೆ ಬರದ ಭೂಮಿಗೆ ಸಂಬಂಧಪಟ್ಟಂತೆಯೂ ಕೆಲ ಸಮಸ್ಯೆಗಳಿವೆ. ಈ ಬಗ್ಗೆ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

## ನಗರೋತ್ಥಾನ ಅನುದಾನ ತಾರತಮ್ಯ ನಿವಾರಣೆ: ಸಿಎಂ

ವಿಧಾನಸಭೆ: ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಕಾಂಗ್ರೆಸ್ ಹಾಗೂ ಜೆಡಿಎಸ್ ಶಾಸಕರಿಗೆ ನಗರೋತ್ಥಾನ ಯೋಜನೆಯಡಿ ಹಂಚಿಕೆಯಾಗಿದ್ದ ಅನುದಾನ ರದ್ದುಪಡಿಸಿರುವ ವಿಚಾರದ ಬಗ್ಗೆ ಗಂಭೀರ ಚರ್ಚೆ ನಡೆದು ಆರ್ಥಿಕ ಸಂಕಷ್ಟದ ಕಾರಣ ಕೆಲವೊಂದು ಕ್ರಮ ಕೈಗೊಳ್ಳಲಾಗಿದ್ದು, ಇದೀಗ ಎಲ್ಲವನ್ನೂ ಸರಿಪಡಿಸಲಾಗುವುದು ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಭರವಸೆ ನೀಡಿದರು. ಈ ಕುರಿತು ನಡೆದ ವಿಶೇಷ ಚರ್ಚೆಯಲ್ಲಿ ಪಾಲ್ಗೊಂಡಿದ್ದ ಜೆಡಿಎಸ್‌ನ ಶಿವಲಿಂಗೇಗೌಡ, ಸುರೇಶ್‌ಗೌಡ, ಸಿ.ಎನ್.ಬಾಲಕೃಷ್ಣ, ಎ.ಟಿ.ರಾಮಸ್ವಾಮಿ, ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ 642 ಕೋಟಿ ರೂ. ಬಿಡುಗಡೆಗೆ ಆದೇಶ ಹೊರಡಿಸಲಾಗಿತ್ತು. ಅದರಂತೆ ಕೆಲವೆಡೆ ಕಾಮಗಾರಿಯೂ ಮುಗಿದಿದೆ. ಆದರೆ, ಇದೀಗ ರದ್ದುಪಡಿಸಿರುವುದರಿಂದ ಹಣ ಬಿಡುಗಡೆಯಾಗಿಲ್ಲ ಎಂದು ದೂರಿದರು.

## ಕೇಂದ್ರದ ಅನುದಾನ ಪೂರ್ಣ ಬಳಕೆಗೆ ಕ್ರಮ

ವಿಧಾನಸಭೆ: ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ನಾನಾ ಯೋಜನೆಗಳಡಿ ಬಿಡುಗಡೆಯಾದ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಳಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭರವಸೆ ನೀಡಿದ್ದಾರೆ. ಮಂಗಳವಾರ ಜೆಡಿಎಸ್‌ನ ಶಿವಲಿಂಗೇಗೌಡ ಪ್ರಶ್ನೆಗೆ ಉತ್ತರಿಸಿದ ಯಡಿಯೂರಪ್ಪ 2017-18ನೇ ಸಾಲಿನಲ್ಲಿ ಕೇಂದ್ರ ಸರ್ಕಾರ 25,533 ಕೋಟಿ ರೂ.ಬಿಡುಗಡೆ ಮಾಡಿದ್ದು, ಶೇ.99ರಷ್ಟು ಬಳಕೆಯಾಗಿದೆ. 2018-19ನೇ ಸಾಲಿನಲ್ಲಿ 30,472 ಕೋಟಿ ರೂ.ಬಿಡುಗಡೆಯಾಗಿದ್ದು, ಶೇ.93.88ರಷ್ಟು ಬಳಕೆಯಾಗಿದೆ. 2019-20ರ ಸಾಲಿನಲ್ಲಿ 27,524 ಕೋಟಿ ರೂ. ಬಿಡುಗಡೆಯಾಗಿದ್ದು, ಇದರಲ್ಲಿ 23,355 ಕೋಟಿ ರೂ.ವೆಚ್ಚವಾಗಿದೆ. ಕಳೆದ ಜನವರಿ ಅಂತ್ಯದವರೆಗೆ ಶೇ.84.85ರಷ್ಟು ಅನುದಾನ ಬಳಕೆಯಾಗಿದ್ದು, ಬಾಕಿ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಳಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.



## ಕನ್ನಡಿಗರ ರಕ್ಷಣೆಗೆ ಕೇಂದ್ರ ಕಾರ್ಯಪ್ರವೃತ್ತ

ವಿಧಾನಸಭೆ: ಇಟಲಿಯ ವಿಮಾನ ನಿಲ್ದಾಣದಲ್ಲಿನ ಕನ್ನಡಿಗರು ಸೇರಿ ಭಾರತೀಯರ ರಕ್ಷಣೆಗೆ ಈಗಾಗಲೇ ಕೇಂದ್ರ ವಿದೇಶಾಂಗ ವ್ಯವಹಾರ ಇಲಾಖೆ ಪರಿಶೀಲನೆ ನಡೆಸುತ್ತಿದ್ದು, ಆರೋಗ್ಯ ಸ್ಥಿತಿ ವರದಿ ಆಧರಿಸಿ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಭರವಸೆ ನೀಡಿದರು. ಕಾಂಗ್ರೆಸ್‌ನ ಪ್ರಿಯಾಂಕ್ ಖರ್ಗೆ ಮಂಗಳವಾರ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಉತ್ತರಿಸಿ, ಈಗಾಗಲೇ ಕೇಂದ್ರ ಸರ್ಕಾರ ಭಾರತೀಯರ ರಕ್ಷಣೆಗೆ ಕಾರ್ಯಪ್ರವೃತ್ತವಾಗಿದೆ. ಮಿಲಾನ್ ವಿಮಾನ ನಿಲ್ದಾಣದಲ್ಲಿನ ಕನ್ನಡಿಗರು ಸೇರಿ ಭಾರತೀಯರ ಆರೋಗ್ಯ ತಪಾಸಣೆ ನಡೆದಿದೆ. ರೋಮ್‌ನ ವಿಮಾನನಿಲ್ದಾಣದಲ್ಲಿ ರಕ್ತ ಪರೀಕ್ಷೆ ಸೇರಿ ನಾನಾ ಆರೋಗ್ಯ ತಪಾಸಣೆಗೆ ಒಳಪಡಿಸಲಾಗುತ್ತಿದೆ. ವರದಿ ಆಧರಿಸಿ ಅವರನ್ನು ಭಾರತಕ್ಕೆ ಕಳುಹಿಸುವ ಇಲ್ಲವೇ ಅಲ್ಲಿಯೇ ಪ್ರತ್ಯೇಕವಾಗಿ ಚಿಕಿತ್ಸೆ ಮುಂದುವರಿಸುವ ಬಗ್ಗೆ ನಿರ್ಧಾರ ಕೈಗೊಳ್ಳಲಿದೆ ಎಂದರು.

## ಅವಧಿ ವಿಸ್ತರಣೆ ಅಸಾಧ್ಯ: ಎಸ್‌ಟಿಎಸ್

ವಿಧಾನ ಪರಿಷತ್: ರೈತರು ಸಹಕಾರಿ ಸಂಸ್ಥೆಗಳ ಮೂಲಕ ಕೃಷಿ ಸುತ್ತು ಕೃಷಿಗೆ ಪೂರಕವಾಗಿ ಮಾಡಿರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಸಾಲದ ಅಸಲನ್ನು ಮಾ.31ರೊಳಗೆ ತುಂಬಿದರೆ ಬಡ್ಡಿ ಸಂಪೂರ್ಣ ಮನ್ನಾ ಮಾಡಲಾಗುತ್ತದೆ. ಈ ಅವಧಿಯನ್ನು ವಿಸ್ತರಣೆ ಮಾಡಲು ಸಾಧ್ಯವಿಲ್ಲ ಎಂದು ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ಹೇಳಿದರು. ಜೆಡಿಎಸ್‌ನ ಮರಿತಿಬ್ಬೇಗೌಡರ ಪ್ರಶ್ನೆಗೆ ಉತ್ತರಿಸಿ, 466 ಕೋಟಿ ಸಾಲದ ಬಡ್ಡಿ ಮನ್ನಾಗೆ ಸರ್ಕಾರ ಒಪ್ಪಿದೆ. ಈಗಾಗಲೇ ರೈತರು 60 ಕೋಟಿ ಅಸಲನ್ನು ಪಾವತಿಸಿದ್ದಾರೆ. ಈ ಸಂದರ್ಭದಲ್ಲಿ ಅಸಲು ತುಂಬಲು ಹೆಚ್ಚುವರಿ ಅವಕಾಶ ನೀಡಲು ಸಾಧ್ಯವಿಲ್ಲ. ಇದಕ್ಕೆ ಹಣಕಾಸು ಇಲಾಖೆಯ ಒಪ್ಪಿಗೆಯೂ ಬೇಕಾಗುತ್ತದೆ ಎಂದರು.